# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 537 |
| ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08-12-2023. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿವೆ; ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗಳಿಗೆ ಯಾವ ಕಾಲಮಿತಿಯಲ್ಲಿ ಸ್ವಂತ ಕಟ್ಟಡ ನಿರ್ಮಿಸಲಾಗುವುದು; | ರಾಜ್ಯದಲ್ಲಿ 46769 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿವೆ. ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗಳಿಗೆ ಅನುದಾನ ಮತ್ತು ನಿವೇಶನದ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಕ್ರಮವಹಿಸಲಾಗುವುದು. |
| ಆ) | ಬಾಲಸ್ನೇಹಿ ಯೋಜನೆ ಎಂದರೇನು; ಸದರಿ ಯೋಜನೆಯನ್ನು ಯಾವಾಗ ಜಾರಿಗೆ ತರಲಾಯಿತು; | ಬಾಲಸ್ನೇಹಿ ಯೋಜನೆಯಡಿ ಅಂಗನವಾಡಿ ಕೇಂದ್ರದ ಗೋಡೆಯ ಮೇಲೆ ಶಾಲಾ ಪೂರ್ವ ಶಿಕ್ಷಣಕ್ಕೆ ಪೂರಕವಾಗಿ ಆಕರ್ಷಕ ಪ್ರಾಣಿ ಪಕ್ಷಿಗಳು, ಅಕ್ಷರ ಮಾಲೆ, ಹಣ್ಣು ತರಕಾರಿಗಳು ಇನ್ನಿತರ ಚಿತ್ರಗಳನ್ನು ಬರೆಸಲಾಗುತ್ತಿದೆ.<br><br>ಸದರಿ ಯೋಜನೆಯನ್ನು 2016-17ನೇ ಸಾಲಿನಲ್ಲಿ ಜಾರಿಗೆ ತರಲಾಗಿದೆ. |
| ಇ) | ರಾಜ್ಯದ ಎಷ್ಟು ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿದೆ. ಉಳಿದ ಅಂಗನವಾಡಿಗಳನ್ನು ಯಾವ ಕಾಲಮಿತಿಯಲ್ಲಿ ಬಾಲಸ್ನೇಹಿ ಅಂಗನವಾಡಿಗಳಾಗಿ ಪರಿವರ್ತಿಸಲಾಗುವುದು; | 2016-17ನೇ ಸಾಲಿನಲ್ಲಿ ಬಾಲಸ್ನೇಹಿ ಯೋಜನೆ ಅನುಷ್ಠಾನಗೊಳಿಸಲು ಪ್ರತಿ ಅಂಗನವಾಡಿ ಕೇಂದ್ರಕ್ಕೆ ರೂ.10,000/-ಗಳಂತೆ 10000 ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಅಂಗನವಾಡಿ ಕೇಂದ್ರಗಳನ್ನಾಗಿ ಪರಿವರ್ತಿಸಲು ರೂ. 1000.00 ಲಕ್ಷಗಳನ್ನು ಹಾಗೂ 2017-18ನೇ ಸಾಲಿನಲ್ಲಿ 5000 ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಅಂಗನವಾಡಿ ಕೇಂದ್ರಗಳನ್ನಾಗಿ ಪರಿವರ್ತಿಸಲು ರೂ.500.00 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.<br><br>2018-19ನೇ ಸಾಲಿನಲ್ಲಿ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ರೂ.2649.00 ಲಕ್ಷ ಒದಗಿಸಲಾಗಿದ್ದು, ಈ ಪೈಕಿ ಶೇ.30 ರಷ್ಟು ಅನುದಾನವನ್ನು ಬಾಲಸ್ನೇಹಿ ಯೋಜನೆ ಅನುಷ್ಠಾನಗೊಳಿಸಲು ಭರಿಸುವಂತೆ ಸುತ್ತೋಲೆ ಹೊರಡಿಸಲಾಗಿದೆ.<br>2021-22ನೇ ಸಾಲಿನಲ್ಲಿ ಅಮೃತ ಅಂಗನವಾಡಿ ಯೋಜನೆಯಡಿಯಲ್ಲಿ ಮಂಜೂರು ಮಾಡಲಾದ 750 ಅಂಗನವಾಡಿ ಕೇಂದ್ರಗಳಲ್ಲಿಯೂ ಸಹ ಬಾಲಸ್ನೇಹಿ ಪೇಂಟಿಂಗ್ ಮಾಡಿಸಲು ಕ್ರಮವಹಿಸಲಾಗಿದೆ. |

| | | |
|---|---|---|
| | | ಉಳಿದ ಅಂಗನವಾಡಿ ಕೇಂದ್ರಗಳನ್ನು ಸ್ಥಳೀಯ ಅನುದಾನವನ್ನು ಬಳಕೆ ಮಾಡಿಕೊಂಡು ಬಾಲಸ್ನೇಹಿ ಅಂಗನವಾಡಿಗಳಾಗಿ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ. |
| ಈ) | ಮಕ್ಕಳನ್ನು ಅಂಗನವಾಡಿಗಳಿಗೆ ಸೇರುವಂತೆ ಆಕರ್ಷಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು? | ಅಂಗನವಾಡಿ ಕೇಂದ್ರಗಳಲ್ಲಿ ಬಾಲಸ್ನೇಹಿ ಪೇಂಟಿಂಗ್, ಗೋಡೆಬರಹ, ಕೇಂದ್ರಗಳಲ್ಲಿ ಮಗುವಿನ ಹುಟ್ಟುಹಬ್ಬವನ್ನು ಆಚರಿಸುವುದು, ಆಟದ ಸಲಕರಣೆ ಒದಗಿಸುವುದು, ಸೃಜನಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು, ಶಾಲಾ ಪೂರ್ವ ಶಿಕ್ಷಣಕ್ಕೆ ಬೇಕಾಗಿರುವ ಪರಿಕರಗಳನ್ನು ಉಪಯೋಗಿಸಿಕೊಂಡು ಅಭಿನಯಗೀತೆ ಮತ್ತು ಕಥೆ ಹೇಳುವುದು, ಮಕ್ಕಳನ್ನು ಹೊರಸಂಚಾರಕ್ಕೆ ಕರೆದುಕೊಂಡು ಹೋಗುವುದರ ಮೂಲಕ ಹೆಚ್ಚು ಹೆಚ್ಚು ಮಕ್ಕಳನ್ನು ಅಂಗನವಾಡಿ ಕೇಂದ್ರಗಳಿಗೆ ಆಕರ್ಷಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಮಮಇ 218 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.